Akashvani: Bangalore
National Bulletin In Kannada
27.03.2026: 7.35AM
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
27.03.2026: 7.35AM
********

**ಮುಖ್ಯಾಂಶಗಳು**

1. ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಸಮಾಲೋಚನೆ
2. ಜಿ-೭ ವಿದೇಶಾಂಗ ಸಚಿವರ ಸಭೆ; ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆಗಳ ಅಗತ್ಯತೆ ಕುರಿತು ಭಾರತ ಪ್ರತಿಪಾದನೆ
3. ಹಾರ್ಮುಜ್ ಜಲಸಂಧಿ ತೆರೆಯಲು ಇರಾನ್‌ಗೆ ನೀಡಿದ್ದ ಗಡುವನ್ನು ಏಪ್ರಿಲ್ ೬ರ ವರೆಗೆ ವಿಸ್ತರಿಸಿದ ಅಮೆರಿಕ
4. ಎಸ್‌ಎಎಫ್‌ಎಫ್ ೨೦ ವರ್ಷದೊಳಗಿನವರ ಫುಟ್ಬಾಲ್ ಚಾಂಪಿಯನ್‌ಶಿಪ್; ಪಾಕಿಸ್ತಾನ ವಿರುದ್ಧ ಭಾರತಕ್ಕೆ ಭರ್ಜರಿ ಜಯ

**********

ಪಶ್ಚಿಮ ಏಷ್ಯಾದ ಸಂಘರ್ಷದ ಕುರಿತು ರಾಜ್ಯಗಳ ಸಿದ್ಧತೆ ಮತ್ತು ಯೋಜನೆಗಳನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ, ಇಂದು ಸಂಜೆ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಮಾಲೋಚನೆ ನಡೆಸಲಿದ್ದಾರೆ. ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಪರಿಸ್ಥಿತಿಯನ್ನು ಸಂಘಟನಾತ್ಮಕವಾಗಿ ನಿಭಾಯಿಸಲು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆಗಳು ಹಾಗೂ ಕಾರ್ಯಯೋಜನೆಗಳ ಬಗ್ಗೆ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಗಳಿವೆ. ಕೇಂದ್ರ ಸರ್ಕಾರ ಈಗಾಗಲೇ ಕೈಗೊಂಡಿರುವ ಉಪಕ್ರಮಗಳು ಹಾಗೂ ರಾಜತಾಂತ್ರಿಕ ಪ್ರಯತ್ನಗಳ ಬಗ್ಗೆ ರಾಜ್ಯಗಳಿಗೆ ಮಾಹಿತಿ ನೀಡುವುದು ಸೇರಿದಂತೆ ಪೆಟ್ರೋಲಿಯಂ ಹಾಗೂ ಅಡುಗೆ ಅನಿಲ ಪೂರೈಕೆ ವ್ಯವಸ್ಥೆಯನ್ನು ನಿಭಾಯಿಸಲು ಪ್ರಧಾನಿ ಅವರು ಮುಖ್ಯಮಂತ್ರಿಗಳಿಗೆ ನಿರ್ದೇಶನ ನೀಡುವ ಸಾಧ್ಯತೆ ಇದೆ.

**********

ಫ್ರಾನ್ಸ್‌ನ ಅಬ್ಬಾಯೆ ಡೆಸ್-ವೋಕ್ಸ್-ಡಿ-ಸೆರ್ನೆಯಲ್ಲಿ ನಡೆದ ಜಿ-೭ ವಿದೇಶಾಂಗ ಸಚಿವರ ಸಭೆಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ವಿಶ್ವ ಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆಗಳು, ಶಾಂತಿಪಾಲನಾ ಕಾರ್ಯಾಚರಣೆಗಳನ್ನು ಸುವ್ಯವಸ್ಥಿತಗೊಳಿಸುವುದು ಮತ್ತು ಮಾನವೀಯ ಪೂರೈಕೆ ಸರಪಳಿಗಳನ್ನು ಬಲಪಡಿಸುವ ತುರ್ತುಸ್ಥಿತಿಯ ಅಗತ್ಯವನ್ನು ಪ್ರತಿಪಾದಿಸಿದರು. ಇಂಧನ ಸವಾಲುಗಳು, ರಸಗೊಬ್ಬರ ಪೂರೈಕೆ ಮತ್ತು ಆಹಾರ ಭದ್ರತೆಯ ಬಗ್ಗೆ ಜಾಗತಿಕ ದಕ್ಷಿಣದ ಕಳವಳಗಳನ್ನು ಡಾ. ಜೈಶಂಕರ್ ವ್ಯಕ್ತಪಡಿಸಿದರು.

**********

ಫ್ರಾನ್ಸ್‌ನಲ್ಲಿ ನಡೆದ ಜಿ೭ ವಿದೇಶಾಂಗ ಸಚಿವರ ಸಭೆಯ ನೇಪಥ್ಯದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಕೆನಡಾದ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರನ್ನು ಭೇಟಿಯಾದರು. ಎರಡೂ ದೇಶಗಳ ಮುಂದುವರಿದ ದ್ವಿಪಕ್ಷೀಯ ಕಾರ್ಯಸೂಚಿಯ ಬಗ್ಗೆ ಚರ್ಚಿಸಲಾಗಿದೆ. ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಬಗ್ಗೆಯೂ ಚರ್ಚಿಸಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಡಾ. ಜೈಶಂಕರ್ ತಿಳಿಸಿದ್ದಾರೆ. ಬಳಿಕ ಡಾ. ಜೈಶಂಕರ್ ಅವರು ಕೊರಿಯಾದ ವಿದೇಶಾಂಗ ಸಚಿವ ಚೋ ಹ್ಯುನ್ ಅವರನ್ನು ಸಹ ಭೇಟಿಯಾಗಿ ಉಭಯ ದೇಶಗಳ ನಡುವಿನ ಪಾಲುದಾರಿಕೆಯ ಪ್ರಗತಿಯ ಕುರಿತು ಚರ್ಚಿಸಿದರು.

**********

ದೇಶಾದ್ಯಂತ ಕವಚ್ ೪.೦ ಅನುಷ್ಠಾನದ ಪ್ರಗತಿಯನ್ನು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಪರಿಶೀಲಿಸಿದರು. ಹೆಚ್ಚು ಪರಿಣಾಮಕಾರಿ ರೈಲು ಕಾರ್ಯಾಚರಣೆಗಳನ್ನು ಖಚಿತಪಡಿಸಿಕೊಳ್ಳಲು ನಿಯೋಜನೆಯನ್ನು ವೇಗಗೊಳಿಸುವುದು ಮತ್ತು ಸುಧಾರಿತ ತಂತ್ರಜ್ಞಾನವನ್ನು ಬಳಸಿಕೊಳ್ಳುವತ್ತ ಸಭೆ ಗಮನಹರಿಸಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಕವಚ್ ಸ್ಥಾಪನೆಗಳ ನೈಜ-ಸಮಯದ ಮೇಲ್ವಿಚಾರಣೆ ಮತ್ತು ಮುನ್ಸೂಚಕ ನಿರ್ವಹಣೆಯನ್ನು ಸಕ್ರಿಯಗೊಳಿಸಲು ಕೇಂದ್ರೀಕೃತ ಮೇಲ್ವಿಚಾರಣಾ ವೇದಿಕೆ, ಸುರಕ್ಷಾವನ್ನು ಏಕೀಕೃತ

ಕಾರ್ಯಾಚರಣೆ ನಿರ್ವಹಣಾ ವ್ಯವಸ್ಥೆಯಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಇಲ್ಲಿಯವರೆಗೆ, ಕವಚ್ ಅನ್ನು ೩ ಸಾವಿರ ೧೦೩ ಕಿಲೋಮೀಟರ್‌ಗಳಲ್ಲಿ ಸ್ಥಾಪಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಹೆಚ್ಚಿನ ಸಾಂದ್ರತೆ ಮತ್ತು ಹೆಚ್ಚಿನ ಬಳಕೆಯ ಕಾರಿಡಾರ್‌ಗಳನ್ನು ಒಳಗೊಂಡಂತೆ ಪ್ರಸ್ತುತ ೨೪ ಸಾವಿರದ ೪೨೭ ಕಿಲೋಮೀಟರ್‌ಗಳಲ್ಲಿ ಕವಾಚ್ ಆಳವಡಿಕೆ ಕಾರ್ಯ ಪ್ರಗತಿಯಲ್ಲಿದೆ. ಕವಚ್ ೪.೦ ಅನ್ನು ವೇಗವಾಗಿ ಅನುಷ್ಠಾನಗೊಳಿಸಲು ಸಹಾಯ ಮಾಡಲು ಸ್ಥಳೀಯ ಸಾರ್ವತ್ರಿಕ ಬ್ರೇಕಿಂಗ್ ಅಲ್ಗಾರಿದಮ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಆವೃತ್ತಿ ೪.೦ ನಿಯೋಜನೆಯ ಭಾಗವಾಗಿ, ಈಗಾಗಲೇ ದೆಹಲಿ-ಮುಂಬೈ ಮತ್ತು ದೆಹಲಿ-ಹೌರಾದಂತಹ ಪ್ರಮುಖ ಕಾರಿಡಾರ್‌ಗಳಲ್ಲಿ ೧ ಸಾವಿರದ ೬೩೮ ರೂಟ್ ಕಿಲೋಮೀಟರ್‌ಗಳಲ್ಲಿ ಕವಾಚ್ ಅನ್ನು ನಿಯೋಜಿಸಿವೆ. ಆದರೆ ೭ ಸಾವಿರದ ೧೦೦ ಕಿಲೋಮೀಟರ್‌ಗಳಲ್ಲಿ ಸ್ಥಾಪನೆಗಳು ನಡೆಯುತ್ತಿವೆ.     ೮ ಸಾವಿರದ ೯೨೧ ಕಿಲೋಮೀಟರ್‌ಗಳಲ್ಲಿ ಆಪ್ಟಿಕಲ್ ಫೈಬರ್ ಕೇಬಲ್ ಹಾಕಲಾಗಿದ್ದು, ೧ ಸಾವಿರದ ೧೮೩ ಟೆಲಿಕಾಂ ಟವರ್‌ಗಳು ಮತ್ತು ೭೬೭ ಕೇಂದ್ರಗಳಲ್ಲಿ ಕವಚ್ ಡೇಟಾ ಸೆಂಟರ್‌ಗಳ ಸ್ಥಾಪನೆಗಳು ಇದಕ್ಕೆ ಬೆಂಬಲ ನೀಡುತ್ತವೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

**********

ರೈಲ್ವೆ ಹಳಿಗಳನ್ನು ದಾಟುವಾಗ ಅಪಘಾತಗಳನ್ನು ತಡೆಗಟ್ಟಲು ದೇಶಾದ್ಯಂತ ಅನುಕೂಲಕರ ಸುರಂಗ ಮಾರ್ಗಗಳನ್ನು ರೈಲ್ವೆ ನಿರ್ಮಿಸಲಿದೆ. ನವದೆಹಲಿಯಲ್ಲಿ ನಡೆದ ಕಾರ್ಯಾಗಾರದಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಈ ಉಪಕ್ರಮದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರೈಲ್ವೆ ಹಳಿಗಳಾದ್ಯಂತ ಅವುಗಳ ನಿರ್ಮಾಣವನ್ನು ಕೇವಲ ೧೨ ಗಂಟೆಗಳಲ್ಲಿ ಪೂರ್ಣಗೊಳಿಸುವ ರೀತಿಯಲ್ಲಿ ಈ ಸುರಂಗ ಮಾರ್ಗಗಳನ್ನು ವಿನ್ಯಾಸಗೊಳಿಸಲಾಗುವುದು ಎಂದು ಅವರು ತಿಳಿಸಿದರು. ಜನರು ಸುರಂಗಮಾರ್ಗಗಳನ್ನು ಬಳಸಲು ಯಾವುದೇ ಹಿಂಜರಿಕೆಯನ್ನು ಅನುಭವಿಸದಂತೆ ವಿನ್ಯಾಸ ಇರಬೇಕು. ಈ ಸುರಂಗ ಮಾರ್ಗಗಳ ನಿರ್ಮಾಣದ ಸಮಯದಲ್ಲಿ, ಸಾಮಾನ್ಯ ವ್ಯಕ್ತಿಯು ಸೈಕಲ್, ಮೋಟಾರ್ ಸೈಕಲ್ ಅಥವಾ ಅವರ ಕೆಲಸ ಮತ್ತು ಜೀವನೋಪಾಯಕ್ಕೆ ಸಂಬಂಧಿಸಿದ ಇತರ ವಸ್ತುಗಳನ್ನು ಹೊತ್ತುಕೊಂಡು ಸುಲಭವಾಗಿ ಪ್ರಯಾಣಿಸಲು ಸಾಧ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಸಚಿವ ಅಶ್ವಿನಿ ವೈಷ್ಣವ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

**********

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹಾರ್ಮುಜ್ ಜಲಸಂಧಿಯನ್ನು ತೆರೆಯಲು ಇರಾನ್‌ಗೆ ನೀಡಿದ್ದ ಗಡುವನ್ನು ಏಪ್ರಿಲ್ ೬ ರವರೆಗೆ ವಿಸ್ತರಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಟ್ರಂಪ್, ಇರಾನ್‌ನ ಇಂಧನ ಸ್ಥಾವರಗಳ ಮೇಲೆ ಬಾಂಬ್ ದಾಳಿ ಮಾಡುವುದನ್ನು ಸ್ಥಗಿತಗೊಳಿಸುವುದಾಗಿ ತಿಳಿಸಿದ್ದಾರೆ. ಏತನ್ಮಧ್ಯೆ, ಅಮೆರಿಕ ಪಡೆಗಳು ಹಾರ್ಮುಜ್ ಜಲಸಂಧಿ ಪ್ರದೇಶವನ್ನು ಸಮೀಪಿಸಿವೆ. ಇರಾನ್ ಬೆಂಬಲಿತ ಹೆಜ್ಬೊಲ್ಲಾ ವಿರುದ್ಧ ಹೋರಾಡಲು ಇಸ್ರೇಲ್, ದಕ್ಷಿಣ ಲೆಬನಾನ್‌ಗೆ ಹೆಚ್ಚಿನ ಸೈನ್ಯವನ್ನು ಕಳುಹಿಸಿದೆ. ಆದರೆ ಇರಾನ್, ನಿರ್ಣಾಯಕ ಹಾರ್ಮುಜ್ ಜಲಸಂಧಿಯ ಮೇಲೆ ತನ್ನ ಹಿಡಿತವನ್ನು ಬಿಗಿಗೊಳಿಸಿದೆ.

**********

ಅಬುಧಾಬಿಯಲ್ಲಿ ನಿನ್ನೆ ನಡೆದ ಘಟನೆಯಲ್ಲಿ ಭಾರತೀಯ ಪ್ರಜೆಯ ಸಾವಿಗೆ ಯುಎಇ ಯಲ್ಲಿರುವ ಭಾರತೀಯ ರಾಯಭಾರ ಕಚೇರಿ ಸಂತಾಪ ಸೂಚಿಸಿದೆ.     ದುರದೃಷ್ಟಕರ ಘಟನೆಯಲ್ಲಿ ಅವಶೇಷಗಳು ಬಿದ್ದು, ಭಾರತೀಯ ಪ್ರಜೆಯ ಸಾವು ಸಂಭವಿಸಿದೆ. ಸಾಧ್ಯವಿರುವ ಎಲ್ಲ ಬೆಂಬಲ ಮತ್ತು ಸಹಾಯವನ್ನು ನೀಡಲು ಯುಎಇ ಅಧಿಕಾರಿಗಳೊಂದಿಗೆ ನಿಕಟ ಸಮನ್ವಯದಲ್ಲಿ ಕಾರ್ಯನಿರ್ವಹಿಸಲಾಗುವುದು ಎಂದು ರಾಯಭಾರ ಕಚೇರಿ ತಿಳಿಸಿದೆ.

**********

ರಾಷ್ಟ್ರೀಯ ಸ್ವತಂತ್ರ ಪಕ್ಷ-ಆರ್‌ಎಸ್‌ಪಿ ನಾಯಕ ಬಾಲೇಂದ್ರ ಶಾ ಅವರು ಇಂದು ನೇಪಾಳದ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಈ ಮೂಲಕ ಅವರು ನೇಪಾಳದ ಅತ್ಯಂತ ಕಿರಿಯ ಚುನಾಯಿತ ಪ್ರಧಾನಿಯಾಗಲಿದ್ದಾರೆ.ಕಠ್ಮಂಡುವಿನ ಶೀತಲ್ ನಿವಾಸ್‌ನಲ್ಲಿರುವ ಅಧ್ಯಕ್ಷರ ಕಚೇರಿಯಲ್ಲಿ ಪ್ರಮಾಣವಚನ ಸ್ವೀಕಾರ ಸಮಾರಂಭ ನಡೆಯಲಿದೆ.ಬಾಲೇಂದ್ರ ಶಾ ಅವರು ನಿನ್ನೆ ಆರ್‌ಎಸ್‌ಪಿ ಸಂಸದೀಯ ಪಕ್ಷದ ನಾಯಕರಾಗಿ ಆಯ್ಕೆಯಾದರು.ಮಾರ್ಚ್ ೫ ರಂದು ನಡೆದ ನೇಪಾಳ ಸಂಸತ್ ಚುನಾವಣೆಯಲ್ಲಿ ಆರ್‌ಎಸ್‌ಪಿ ಭರ್ಜರಿ ಜಯ ಸಾಧಿಸಿತು.

**********

ಮಾಲ್ದೀವ್ಸ್‌ನ ಮಾಲೆಯ ರಾಷ್ಟ್ರೀಯ ಫುಟ್ಬಾಲ್ ಕ್ರೀಡಾಂಗಣದಲ್ಲಿ ಎಸ್‌ಎಫ್‌ಎಫ್ ೨೦ ವರ್ಷದೊಳಗಿನ ಪುರುಷರ ಫುಟ್ಬಾಲ್ ಚಾಂಪಿಯನ್‌ಶಿಪ್‌ನ ನಿನ್ನೆ ನಡೆದ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಭಾರತ ತಂಡ, ಪಾಕಿಸ್ತಾನದ ವಿರುದ್ಧ ೩-೦ ಗೋಲುಗಳೊಂದಿಗೆ ಭರ್ಜರಿ ಜಯ ಗಳಿಸಿತು. ಈ ಗೆಲುವಿನೊಂದಿಗೆ ಭಾರತ ಸೆಮಿಫೈನಲ್ ಪ್ರವೇಶಿಸಿತು. ನಾಳೆ ನಡೆಯಲಿರುವ ಸೆಮಿಫೈನಲ್‌ನಲ್ಲಿ ಭಾರತ, ಬಾಂಗ್ಲಾದೇಶ ತಂಡವನ್ನು ಎದುರಿಸಲಿದೆ.

**********

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ, ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ೨೦೨೬ರ ಎರಡನೇ ಹಂತದ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ. ಪ್ಲೇ ಆಫ್‌ಗಳ ಸ್ಥಳಗಳ ಕುರಿತು ವಿವರಗಳನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು ಎಂದು ಬಿಸಿಸಿಐ ಹೇಳಿದೆ.ಎರಡನೇ ಹಂತದ ಐಪಿಎಲ್ ಪಂದ್ಯಗಳು ಬೆಂಗಳೂರು, ಮುಂಬೈ, ಚೆನ್ನೈ, ಕೋಲ್ಕತ್ತಾ ಮತ್ತು ದೆಹಲಿ ಸೇರಿದಂತೆ ೧೨ ನಗರಗಳಲ್ಲಿ ಏಪ್ರಿಲ್ ೧೩ ರಿಂದ ಮೇ ೨೪ ರವರೆಗೆ ಒಟ್ಟು ೫೦ ಪಂದ್ಯಗಳು ನಡೆಯಲಿವೆ. ಐಪಿಎಲ್‌ನ ಮೊದಲ ಹಂತವು ನಾಳೆ ಆರಂಭವಾಗಲಿದ್ದು, ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಮುಖಾಮುಖಿಯಾಗಲಿವೆ.

**********

ಮೊದಲ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದ ಎರಡನೇ ದಿನವಾದ ನಿನ್ನೆ ಛತ್ತೀಸ್‌ಗಢದಲ್ಲಿ ಈಜು, ವೇಟ್‌ಲಿಫ್ಟಿಂಗ್, ಹಾಕಿ ಮತ್ತು ಫುಟ್‌ಬಾಲ್ ಸ್ಪರ್ಧೆಗಳು ನಡೆದವು.ಕರ್ನಾಟಕದ ಈಜುಗಾರ ಮಣಿಕಾಂತ ಎಲ್. ೨೦೦ ಮೀಟರ್ ವೈಯಕ್ತಿಕ ಮೆಡ್ಲೆ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದು ಹ್ಯಾಟ್ರಿಕ್ ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡರು. ಏತನ್ಮಧ್ಯೆ, ಒಡಿಶಾದ ಅಂಜಲಿ ಮುಂಡಾ, ಮಹಿಳೆಯರ ೨೦೦ ಮೀಟರ್ ವೈಯಕ್ತಿಕ ಮೆಡ್ಲೆ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದರು. ಈ ಮೂಲಕ ಸ್ಪರ್ಧೆಯಲ್ಲಿ ತಮ್ಮ ಎರಡನೇ ಚಿನ್ನವನ್ನು ಗಳಿಸಿದರು. ವೇಟ್‌ಲಿಫ್ಟಿಂಗ್‌ನಲ್ಲಿ, ಅಸ್ಸಾಂನ ಮೋನಿಖಾ ಸೋನೋವಾಲ್ ४८ ಕಿಲೋಗ್ರಾಂ ವಿಭಾಗದಲ್ಲಿ ಚಿನ್ನದ ಪದಕ ವಿಜೇತರಾದರೆ, ಮಿಜೋರಾಂನ ಇಸಾಕ್ ಮಲ್ಸಾಮ್ತುಂಗಾ ೬೦ ಕಿಲೋಗ್ರಾಂ ವಿಭಾಗದಲ್ಲಿ ಚಿನ್ನ ಗೆದ್ದರು. ಪದಕ ಪಟ್ಟಿಯಲ್ಲಿ, ಕರ್ನಾಟಕ ಆರು ಚಿನ್ನ ಮತ್ತು ಎರಡು ಬೆಳ್ಳಿ ಪದಕಗಳೊಂದಿಗೆ ಮುಂಚೂಣಿಯಲ್ಲಿದೆ. ಒಡಿಶಾ ಮೂರು ಚಿನ್ನ, ಒಂದು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಮೂರನೇ ದಿನವಾದ ಇಂದು, ಈಜು, ವೇಟ್‌ಲಿಫ್ಟಿಂಗ್, ಹಾಕಿ, ಫುಟ್‌ಬಾಲ್ ಮತ್ತು ಕುಸ್ತಿ ಸ್ಪರ್ಧೆಗಳು ನಡೆಯಲಿವೆ. ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟವು ಇದೇ ೨೫ ರಂದು ಛತ್ತೀಸ್‌ಗಢದಲ್ಲಿ ಪ್ರಾರಂಭವಾಯಿತು ಮತ್ತು ಏಪ್ರಿಲ್ ೩ ರವರೆಗೆ ಮುಂದುವರಿಯುತ್ತದೆ. ಮೂವತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಮೂರು ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದಾರೆ. ಬಿಲ್ಲುಗಾರಿಕೆ, ಅಥ್ಲೆಟಿಕ್ಸ್, ಫುಟ್ಬಾಲ್, ಹಾಕಿ, ಈಜು, ಭಾರ ಎತ್ತುವ ಸ್ಪರ್ಧೆ ಮತ್ತು ಕುಸ್ತಿ ಎಂಬ ಏಳು ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯುತ್ತಿದ್ದು, ಮಲ್ಲಕಂಬ ಮತ್ತು ಕಬಡ್ಡಿಯನ್ನು ಪ್ರದರ್ಶನ ಕ್ರೀಡೆಗಳಾಗಿ ಸೇರಿಸಲಾಗಿದೆ. ಈ ಕ್ರೀಡಾಕೂಟಗಳು ರಾಯ್‌ಪುರ, ಬಸ್ತಾರ್ ಮತ್ತು ಸುರ್ಗುಜಾದಲ್ಲಿ ನಡೆಯುತ್ತಿವೆ.

*****END*****